ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

कर्नाटक–संस्कृत–विश्वविद्यालय:
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

ಕಸಂವಿ/ಜ್ಯೋ/01/2018–19 ದಿನಾಂಕ : 24.08.2018

## ಅಧಿಸೂಚನೆ

2018–19ನೇ ಸಾಲಿನ ಶೈಕ್ಷಣಿಕ ಅವಧಿಗೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಿಂದ ಜ್ಯೋತಿಷ್ಯ ಹಾಗೂ ವಾಸ್ತುಶಾಸ್ತ್ರಗಳ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಜ್ಯೋತಿಷ್ಯ ಅಡ್ವಾನ್ಸ್ ಡಿಪ್ಲೋಮಾ ಕೋರ್ಸ್‌ಗಳಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆವೇದನಾ ಪತ್ರವನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ಕೋರ್ಸಗಳ ವಿವರ | ಶುಲ್ಕ | ಅರ್ಹತೆ |
|---|---|---|---|
| 1 | ಸರ್ಟಿಫಿಕೇಟ್ ಜ್ಯೋತಿಷ್ಯ/ವಾಸ್ತು | 1500/–(ಪರೀಕ್ಷಾಶುಲ್ಕ ಪ್ರತ್ಯೇಕ) | ಪಿ.ಯು.ಸಿ ಅಥವಾ ತತ್ಸಮಾನ |
| 2 | ಡಿಪ್ಲೋಮಾ ಜ್ಯೋತಿಷ್ಯ/ವಾಸ್ತು | 2000/–(ಪರೀಕ್ಷಾಶುಲ್ಕ ಪ್ರತ್ಯೇಕ) | ಸರ್ಟಿಫಿಕೇಟ್ ಜ್ಯೋತಿಷ್ಯ/ವಾಸ್ತು |
| 3 | ಅಡ್ವಾನ್ಸ್‌ಡಿಪ್ಲೋಮಾ ಜ್ಯೋತಿಷ್ಯ | 2500/–(ಪರೀಕ್ಷಾಶುಲ್ಕ ಪ್ರತ್ಯೇಕ) | ಡಿಪ್ಲೋಮಾ ಜ್ಯೋತಿಷ್ಯ |

***ವಿದ್ಯಾರ್ಥಿಗಳು ಜ್ಯೋತಿಷ್ಯ ಅಧ್ಯಯನ ಕೇಂದ್ರಗಳಿಗೆ ಆವೇದನ ಪತ್ರ ಸಲ್ಲಿಸಲು ಕೊನೆಯ ದಿನಾಂಕ:12.09.2018.***

***ಜ್ಯೋತಿಷ್ಯ ಅಧ್ಯಯನ ಕೇಂದ್ರಗಳು ಪ್ರವೇಶಾತಿ ಶುಲ್ಕದೊಂದಿಗೆ ವಿಶ್ವವಿದ್ಯಾಲಯಕ್ಕೆ ಆವೇದನ ಪತ್ರ ಸಲ್ಲಿಸಲು ಕೊನೆಯ ದಿನಾಂಕ:15.09.2018.***

ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ **'ಕುಲಸಚಿವರು, ಅಥವಾ ನಿರ್ದೇಶಕರು,** ಅಧ್ಯಯನಾಂಗ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು–18 ಇವರ ಕಛೇರಿಯನ್ನು **(ದೂ:080–26705387/26701303)** ಸಂಪರ್ಕಿಸಬಹುದು ಅಥವಾ ವಿಶ್ವವಿದ್ಯಾಲಯದ ಜಾಲತಾಣ **www.ksu.ac.in**ನಲ್ಲಿ ವಿವರಗಳನ್ನು ಪಡೆಯಬಹುದು.

ಉಪ–ಕುಲಸಚಿವರು

**ಸೂಚನೆಗಳು :**

1. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಮಾನ್ಯತೆ ಪಡೆದ ಅಧ್ಯಯನ ಕೇಂದ್ರಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.
2. ಪ್ರವೇಶ ಶುಲ್ಕದ (ಹುಂಡಿ)ಯನ್ನು**(Finance officer, Karnataka samskrita University Bangalore) ಹಣಕಾಸು ಅಧಿಕಾರಿಗಳು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರು (560018)** ಈ ಹೆಸರಿನಲ್ಲಿ ಪಡೆದು ನಿಗದಿತ ದಿನಾಂಕದೊಳಗೆ ಅರ್ಜಿಯೊಂದಿಗೆ ಡಿ.ಡಿ. ಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವುದು.
3. ಆಯಾ ಅಧ್ಯಯನಕೇಂದ್ರಗಳಿಗೆ ದಾಖಲಾದ ವಿದ್ಯಾರ್ಥಿಗಳ ಪ್ರವೇಶಶುಲ್ಕವನ್ನು ಅಧ್ಯಯನ ಕೇಂದ್ರದವತಿಯಿಂದ ಒಂದೇ ಡಿ.ಡಿ. ಯ ಮುಖಾಂತರ ಕಳುಹಿಸಬೇಕು. ವಿದ್ಯಾರ್ಥಿಗಳು ಪ್ರತ್ಯೇಕವಾಗಿ ಡಿ.ಡಿ.ಯನ್ನು ಸಲ್ಲಿಸಿದರೆ ಅದನ್ನು ಮಾನ್ಯ ಮಾಡಲಾಗುವುದಿಲ್ಲ.
4. ತರಗತಿವಾರು ವಿದ್ಯಾರ್ಥಿಗಳ ಮತ್ತು ಪ್ರವೇಶಶುಲ್ಕದ ವಿವರಗಳನ್ನು ಅರ್ಜಿಯಲ್ಲಿ(covering letter) ಸ್ಪಷ್ಟವಾಗಿ ನಮೂದಿಸತಕ್ಕದ್ದು.
5. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.
6. ಜನ್ಮ ದಿನಾಂಕದ ದಾಖಲೆಯಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ನಕಲು ಪ್ರತಿಯನ್ನು ಧೃಢೀಕರಿಸಿ ಅರ್ಜಿಯ ಜೊತೆ ಲಗತ್ತಿಸಬೇಕು.
7. ಆಯಾಯ ಕೋರ್ಸಿಗೆ ನಿಗದಿತ ಅರ್ಹತೆಯನ್ನು ಪೂರ್ಣಗೊಳಿಸಿರುವ ಅಂಕಪಟ್ಟಿಯ ನಕಲು ಪ್ರತಿಯನ್ನು ಧೃಢೀಕರಿಸಿ ಲಗತ್ತಿಸಬೇಕು. ಸೂಚಿಸಿದ ವಿದ್ಯಾರ್ಹತೆಯ ದಾಖಲೆಯು ಇಲ್ಲವಾದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು ಮತ್ತು ವಿದ್ಯಾರ್ಥಿಯು ಪರೀಕ್ಷೆಗೆ ಅನರ್ಹನಾಗುತ್ತಾನೆ/ಳೆ.

8. ಪ್ರವೇಶದಾಖಲಾತಿ ಪಟ್ಟಿಯಲ್ಲಿ ನಮೂದಿತವಾಗದಿರುವ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.
9. ಪರೀಕ್ಷಾಶುಲ್ಕವನ್ನು ಪರೀಕ್ಷಾ ಅಧಿಸೂಚನೆಯನ್ನು ಹೊರಡಿಸಿದ ಅನಂತರದಲ್ಲಿ ನಿಗದಿಪಡಿಸಿದಂತೆ ಪ್ರತ್ಯೇಕವಾಗಿ ಭರಿಸಬೇಕಾಗುವುದು.
10. ಮಾನ್ಯತೆ ನವೀಕರಣ ಮಾಡಿಕೊಳ್ಳದ ಮತ್ತು ವಾರ್ಷಿಕ ಶುಲ್ಕವನ್ನು ಪಾವತಿಸದ ಜ್ಯೋತಿಷ್ಯ ಅಧ್ಯಯನ ಕೇಂದ್ರಗಳ ವಿದ್ಯಾರ್ಥಿಗಳಿಗೆ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.

ಪ್ರತಿಗಳು :

1. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು–18
2. **ಮಾನ್ಯ ಕುಲಪತಿಗಳ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು–18
3. **ಮಾನ್ಯ ಕುಲಸಚಿವರ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು–18
4. **ಹಣಕಾಸು ಅಧಿಕಾರಿಗಳ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು–18
5. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಜಾಲತಾಣ ಹಾಗೂ ಸೂಚನಾ ಫಲಕಗಳು
6. **ಜ್ಯೋತಿಷ್ಯ ಅಧ್ಯಯನ ಕೇಂದ್ರದ ಪ್ರಾಂಶುಪಾಲರು/ಅಧ್ಯಕ್ಷರು**
7. ಕಛೇರಿ ಪ್ರತಿ ಮತ್ತು ರಕ್ಷತಾ ಪ್ರತಿ